ದಿನಾಂಕಃ **24-09-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ಬೋಧಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಾದ ಶ್ರೀ ಎನ್.ಎಂ.ಎಸ್.ರವರಿಂದ ಃ

**1.** ನಾನು ಕೃಷ್ಣಾನಗರದಲ್ಲಿ 20 ವರ್ಷಗಳಿಂದ ವಾಸವಾಗಿದ್ದೇನೆ. ದಾವಾ ಸ್ವತ್ತಿನಲ್ಲಿ ನಾನು ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ಆರ್ಥಿಕವಾಗಿ ಸಬಲರಾಗಿದ್ದಾರೆ ಎಂದರೆ ಸರಿ. ಸಾಕ್ಷಿಯು 1996 ರಲ್ಲಿ ಆರ್ಥಿಕವಾಗಿ ಸಬಲರಾಗಿರಲಿಲ್ಲ ಎಂದು ನುಡಿಯುತ್ತಾರೆ. ನನ್ನ ಗಂಡ ಗೋವಿಂದೇಗೌಡ ಸರ್ಕಾರಿ ಶಿಕ್ಷಕರು. ನನ್ನ ಗಂಡ ರಾಜಕೀಯ ವ್ಯಕ್ತಿಗಳೊಂದಿಗೆ ಒಡನಾಟ ಹೊಂದಿದ್ದರು ಎಂದರೆ ಸರಿ. ಪ್ರತಿವಾದಿಗಳಿಗೆ ಸರ್ಕಾರದಿಂದ ಅನುದಾನ ಕೊಡಿಸುವುದಾಗಿ ಹೇಳಿ ನನ್ನ ಗಂಡ ಸುಳ್ಳು ಪತ್ರಗಳನ್ನು ಮಾಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ಪ್ರತಿವಾದಿಗಳು ಹಣ್ಣಿನ ಗಿಡಗಳು ಮತ್ತು ಹೂವಿನ ಸಸಿಗಳನ್ನು ನೆಟ್ಟು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ನಿಪಿ-4 ನ್ನು ಸ್ವತ್ತಿನಲ್ಲಿ ಗಿಡ ಗಂಟಿಗಳು ಬೆಳೆದಿರುವ ಬಗ್ಗೆ ನಮೂದಿಸಿದ್ದು, ಈ ದಾವೆಗಾಗಿ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಮತ್ತು ಪ್ರತಿವಾದಿಗಳ ನಡುವೆ ವೈಶಮ್ಯ ಇರುವುದರಿಂದ ಸುಳ್ಳು ದೂರನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ಹೆಸರಿನಲ್ಲಿ ದಾವಾ ಸ್ವತ್ತಿನ ದಾಖಲೆಗಳು ಬರುತ್ತಿದೆ ಎಂದರೆ ಸರಿಯಲ್ಲ. ದಾವೆಯನ್ನು ಹೂಡಲು ಯಾವುದೇ ವ್ಯಾಜ್ಯ ಕಾರಣ ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತು ಪ್ರತಿವಾದಿಗಳಿಗೆ ಸರ್ಕಾರದಿಂದ ಮಂಜೂರಾದ ಸ್ವತ್ತು ಎಂದರೆ ಸರಿಯಲ್ಲ. ಅವರ ಸ್ವತ್ತನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ. ಕೇ. ಸ. ಇದೆ.**

**C/C 1 ನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,**
**ಸಾಕ್ಷಿದಾರರ ಸಹಿ.** **ಪಾಂಡವಪುರ.**